**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ.11.02.2025**

**ಮುಂದುವರಿದ ಪಾಟಿ ಸವಾಲುಃ ವಾದಿ ಪರ ಶ್ರೀ.ಜೆ ವಿ ಆರ್ ವಕೀಲರಿಂದಃ**

5. ಸರ್ವೆ ನಂ.175 ರಲ್ಲಿ ಒಟ್ಟು 2 ಎಕರೆ 4 ಗುಂಟೆ ಇರುತ್ತದೆ. ಸರ್ವೆ ನಂ.175 ರಲ್ಲಿ 5 ಎಕರೆ 7 ಗುಂಟೆ ಇದೆ ಎಂದರೆ ಸರಿಯಲ್ಲ. ಸರ್ವೆ ನಂ.175 ರಲ್ಲಿ ಯಾರು ಎಷ್ಟು ವಿಸ್ತೀರ್ಣದಲ್ಲಿ ಇದ್ದೇವೆ ಎಂದು ಹೇಳಲು ಆಗುವುದಿಲ್ಲ. ಸರ್ವೆ ನಂ.175 ರಲ್ಲಿ ನಾನು, ನನ್ನ ತಮ್ಮ ಮತ್ತು ಅಕ್ಕ ತಂಗಿಯರು ಸ್ವಾಧೀನದಲ್ಲಿದ್ದೇವೆ ಎಂದರೆ ಸರಿಯಲ್ಲ. ಆ ರೀತಿ ನಾವು ಎಲ್ಲರೂ ಸ್ವಾಧೀನದಲ್ಲಿದ್ದರೂ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸರ್ವೆ ನಂ.5/1 ರಲ್ಲಿ ನಾನು 11 ಗುಂಟೆ ವಿಸ್ತೀರ್ಣದಲ್ಲಿ ಸ್ವಾಧೀನದಲ್ಲಿರುತ್ತೇನೆ. ಸರ್ವೆ ನಂ.5/1 ರಲ್ಲಿ ನನ್ನ ಜೊತೆ ಬೇರೆ ಯಾರು ಪಹಣಿದಾರರು ಆಗಿದ್ದಾರೆ ಎಂದು ನನಗೆ ಗೊತ್ತಿರುವುದಿಲ್ಲ. ಸರ್ವೆ ನಂ.5/1 ರಲ್ಲಿ ನನ್ನ ಜೊತೆ ನನ್ನ ತಂದೆಯ ಅಣ್ಣ ತಮ್ಮಂದಿರು ಸಹ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ನನ್ನ ತಂದೆ ಮತ್ತು ಅವರ ಅಣ್ಣ ತಮ್ಮಂದಿರ ನಡುವೆ ವಿಭಾಗ ಆಗಿದ್ದು, ಆ ಕಾರಣದಿಂದ ಪಹಣಿಯಲ್ಲಿ ಅವರ ಹೆಸರು ಬಂದಿದೆ ಎಂದರೆ ಸರಿಯಲ್ಲ. ನನ್ನ ತಂದೆ ಮತ್ತು ಅವರ ಅಣ್ಣ ತಮ್ಮಂದಿರ ನಡುವೆ 1991 ರಲ್ಲಿ ವಿಭಾಗ ಆಗಿದ್ದರೂ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆ ಪ್ರಕಾರ ಎಂ ಆರ್ 7/91-92 ರಂತೆ ಮ್ಯುಟೇಶನ್ ಆಗಿದೆ ಎಂದರೆ ಸರಿಯಲ್ಲ.

6. ತದ ನಂತರ ನನ್ನ ತಂದೆಯ ಅಣ್ಣ ತಮ್ಮಂದಿರ ಹೆಸರಿನಲ್ಲಿ ಪಹಣಿ ಬರುತ್ತಿದೆ ಎಂದರೆ ಸರಿಯಲ್ಲ. ದಿಃ20.07.2005 ರಂದು ವಿಭಾಗ ಆಗಿದೆ ಎಂದು ತೋರಿಸಲು ದಾಖಲೆಗಳನ್ನು ಹಾಜರು ಪಡಿಸಿರುವುದಿಲ್ಲ ಎಂದರೆ ಸಾಕ್ಷಿ ಮೌಕಿಕವಾಗಿ ಆಗಿದೆ ಎಂದು ನುಡಿಯುತ್ತಾರೆ. ಆ ರೀತಿ ಯಾವುದೇ ವಿಭಾಗ ಆಗಿಲ್ಲದೇ ಇದ್ದರೂ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕಂದಾಯ ಅಧಿಕಾರಿಗಳ ಜೊತೆ ಶಾಮೀಲಾಗಿ ಪಹಣಿಗಳಲ್ಲಿ ತಪ್ಪಾಗಿ ನಮೂದು ಮಾಡಿಸಿದ್ದೇನೆ ಎಂದರೆ ಸರಿಯಲ್ಲ. ಸರ್ವೆ ನಂ.18 ನನ್ನ ತಂದೆಯ ಹೆಸರಿಗೆ 18 ಗುಂಟೆ ಸರ್ಕಾರದಿಂದ ಮಂಜೂರು ಆಗಿರುತ್ತದೆ. ಆ ರೀತಿ ಸರ್ಕಾರದಿಂದ ಮಂಜೂರು ಆಗಿರುವ ಬಗ್ಗೆ ದಾಖಲಾತಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ. ಆ ರೀತಿ ಸರ್ಕಾರದಿಂದ ಮಂಜೂರು ಆಗುವ ಸಂದರ್ಬದಲ್ಲಿ ನನ್ನ ಸಹೋದರಿಯರಿಗೆ ಮದುವೆಯಾಗಿರಲಿಲ್ಲ ಎಂದರೆ ಸರಿಯಲ್ಲ. ಆ ರೀತಿ ಮಂಜೂರು ಆಗುವ ಸಂದರ್ಬದಲ್ಲಿ ನಾವೆಲ್ಲರೂ ಒಟ್ಟಾಗಿ ಇದ್ದರೂ ಕೂಡ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-9 ಮತ್ತು 10 ದಾಖಲೆಗಳನ್ನು ಸೃಷ್ಟಿಮಾಡಿ ಹಾಜರು ಪಡಿಸಿದ್ದೇವೆ ಎಂದರೆ ಸರಿಯಲ್ಲ. ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳಾಗಿದ್ದು, ಯಾವುದೇ ಸ್ವಯಾರ್ಜಿತ ಆಸ್ತಿಗಳಿರುವುದಿಲ್ಲ ಎಂದರೆ ಸರಿಯಲ್ಲ. ಎಲ್ಲಾ

ವಿಚಾರಗಳು ಗೊತ್ತಿದ್ದರೂ ನ್ಯಾಯಾಲಯದಲ್ಲಿ ಸುಳ್ಳು ದಾವೆ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**(ಮರು ವಿಚಾರಣೆಃ ಇಲ್ಲ.)**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಎ. ಒಪ್ಪಲಾಗಿದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ದೇವನಹಳ್ಳಿ.**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ.22.11.2024**

**ಪಾಟಿ ಸವಾಲುಃ ವಾದಿ ಪರ ಶ್ರೀ.ಜೆ ವಿ ಆರ್ ವಕೀಲರಿಂದಃ**

1. ನಾನು 9 ನೇ ತರಗತಿ ವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. ನನಗೆ ಕನ್ನಡ ಓದಲು ಬರೆಯಲು ಸ್ವಲ್ಪ ಬರುತ್ತದೆ. ನನಗೆ ಇಂಗ್ಲೀಶ್ ಓದಲು ಬರೆಯಲು ಬರುವುದಿಲ್ಲ ಎಂದರೆ ಸರಿ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರ ಅಲ್ಪ ಸ್ವಲ್ಪ ಗೊತ್ತಿರುತ್ತದೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರಕ್ಕೆ ನಮ್ಮ ವಕೀಲರೇ ಮಾಹಿತಿ ನೀಡಿರುತ್ತಾರೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರಗಳು ಗೊತ್ತಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿರುವ ವಿಚಾರಗಳನ್ನು ಸುಳ್ಳು ಬರೆಸಿದ್ದೇನೆ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿ ನನ್ನ ಅಕ್ಕ. ನನ್ನ ಅಕ್ಕನ ಮದುವೆಯ ಸಂದರ್ಬದಲ್ಲಿ ನನಗೆ ಅಷ್ಟು ಬುದ್ದಿವಂತಿಕೆ ಇರಲಿಲ್ಲ. ನನ್ನ ಅಕ್ಕನ ಮದುವೆ ದಿಃ24.05.1987 ರಲ್ಲಿ ಆಗಿದೆ ಎಂದರೆ ಸರಿ. ನನ್ನ ಅಕ್ಕನ ಮದುವೆ ಊರಿನಲ್ಲಿ ಆಗಿರುತ್ತದೆ. ನನ್ನ ಅಕ್ಕನ ಮದುವೆಯ ಜೊತೆ 3 ಮದುವೆಗಳು ಆಗಿರುತ್ತದೆ. ನನ್ನ ಅಕ್ಕನ ಮದುವೆಯ ಜೊತೆ 2 ಮದುವೆಗಳು ಆಗಿತ್ತು ಎಂದರೆ ಸರಿಯಲ್ಲ. ನನ್ನ ಅಕ್ಕನ ಮದುವೆಯನ್ನು ಅವರ ಗಂಡನ ಕಡೆಯವರು ಮಾಡಿಕೊಂಡರು ಎಂದರೆ ಸರಿಯಲ್ಲ, ಸಾಕ್ಷಿ ಮುಂದುವರಿದು ನನ್ನ ತಂದೆ ಮಾಡಿದ್ದರು ಎಂದು ನುಡಿಯುತ್ತಾರೆ. ನನ್ನ ಅಕ್ಕನ ಮದುವೆಯನ್ನು ನಮ್ಮ ಊರಿನಲ್ಲಿರುವ ವ್ಯಕ್ತಿಗೆ ಮಾಡಿದ್ದಾರೆ ಎಂದರೆ ಸಾಕ್ಷಿ ನನ್ನ ತಂದೆ ಮಾಡಿದ್ದರು ಎಂದು ನುಡಿಯುತ್ತಾರೆ.

2. ನನ್ನ ಅಕ್ಕನ ಮದುವೆಯ ಸಂದರ್ಬದಲ್ಲಿ ಯಾವ ಯಾವ ಒಡವೆಗಳನ್ನು ಕೊಟ್ಟಿದ್ದಾರೆ ಎಂದು ನನಗೆ ಗೊತ್ತಿರುವುದಿಲ್ಲ, ಆದರೆ ನನ್ನ ತಂದೆ ಕೊಟ್ಟಿರುತ್ತಾರೆ. ನನ್ನ ಅಕ್ಕನ ಮದುವೆಯಲ್ಲಿ 3 ಲಕ್ಷ ಒಡುವೆ ಕೊಟ್ಟಿದ್ದೇವೆ ಎಂದು ಹೇಳಿದ್ದೇನೆ ಎಂದರೆ ಸರಿಯಲ್ಲ. ಇದಕ್ಕೆ ಸಂಬಂದಿಸಿದಂತೆ ಯಾವುದೇ ದಾಖಲೆಗಳನ್ನು ಹಾಜರು ಪಡಿಸಿರುವುದಿಲ್ಲ ಎಂದರೆ ಸರಿ. ನನ್ನ ತಂದೆ 3 ಜನ ಹೆಣ್ಣು ಮಕ್ಕಳಿಗೆ ಯಾವುದೇ ಒಡವೆ ಕೊಟ್ಟಿಟಿರುವುದಿಲ್ಲ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ವಾದಿಯ ಮದುವೆ 2000 ನೇ ಇಸವಿಯಲ್ಲಿ ಆಗಿರುತ್ತದೆ. ವಾದಿಯ ಮದುವೆಯನ್ನು ಕೈವಾರದಲ್ಲಿ ಮಾಡಿರುತ್ತೇವೆ. ಕೈವಾರ ಎಂಬುದು ಒಂದು ದೇವಸ್ಥಾನ ಎಂದರೆ ಸರಿ. ವಾದಿಯ ಮದುವೆ ಸಂದರ್ಬದಲ್ಲಿ ಓಲೆಯನ್ನು ಹೊರತು ಪಡಿಸಿ ಯಾವುದೇ ಒಡುವೆ ಕೊಟ್ಟಿರಲಿಲ್ಲ ಎಂದರೆ ಸರಿಯಲ್ಲ. ವಾದಿಯ ಮದುವೆಯನ್ನು ಅವರ ಗಂಡನ ಕಡೆಯವರು ಮಾಡಿಕೊಂಡರು ಎಂದರೆ ಸರಿಯಲ್ಲ. ನನ್ನ ತಂಗಿಯ ಮದುವೆಗೆ 3 ಲಕ್ಷ ಹಣ ಖರ್ಚು ಮಾಡಿದ್ದೆವು ಎಂದು ಸುಳ್ಳು ಹೇಳಿದ್ದೇನೆ ಎಂದರೆ ಸರಿಯಲ್ಲ.

3. ನನ್ನ ತಂದೆಯ ಜೊತೆಯಲ್ಲಿ ಇಬ್ಬರು ಸಹೋದರರು. ಅವರುಗಳೆಂದರೆ ಮುನಿಯಪ್ಪ ಮತ್ತು ಚಿಕ್ಕ ಆಂಜಿನಪ್ಪ. ಆ 3 ಜನ ಸಹೋದರರು ವಿಭಾಗ ಮಾಡಿಕೊಂಡರು ಎಂದರೆ ಸಾಕ್ಷಿ ನನ್ನ ದೊಡ್ಡಪ್ಪ ಆಂಜಿನಪ್ಪ ಖರೀದಿ ಮಾಡಿದ ಆಸ್ತಿಯನ್ನು ನಮಗೆ ಕೊಟ್ಟಿದ್ದರು ಎಂದು ನುಡಿಯುತ್ತಾರೆ. ಪಂಚಾಯಿತಿ ಪಾರಿಕತ್ತು ನನ್ನ ತಂದೆಯ ಹೆಸರಿಗೆ ಖಾತೆ ಆಯಿತು ಎಂದರೆ ಸರಿ. ಅದರ ಆಧಾರದ ಮೇಲೆ ಮ್ಯುಟೇಶನ್ ಬಂದಿದೆ ಎಂದರೆ ಸರಿ. ಸರ್ವೆ ನಂ.175 ಜಮೀನು ನನ್ನ ತಂದೆಗೆ ವಿಭಾಗದ ಮೂಲಕ ಬಂದಿದೆ ಎಂದರೆ ಸಾಕ್ಷಿ ನನ್ನ ದೊಡ್ಡಪ್ಪ ಖರೀದಿ ಮಾಡಿ ವಿಭಾಗದ ಮೂಲಕ ಕೊಟ್ಟಿದ್ದಾರೆ ಎಂದು ನುಡಿಯುತ್ತಾರೆ. ನನ್ನ ತಂದೆ 2004 ರಲ್ಲಿ ಮೃತಪಟ್ಟಿರುತ್ತಾರೆ. ಆಗ ಅವರಿಗೆ ಎಷ್ಟು ವಯಸ್ಸು ಆಗಿತ್ತು ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ತಂದೆ ಸಾಯುವ 1 ವರ್ಷದ ಮೊದಲು ಖಾಯಿಲೆ ಬಿದ್ದಿದ್ದರು ಎಂದರೆ ಸಾಕ್ಷಿ ಯಾವಾಗಲೂ ಖಾಯಿಲೆ ಇತ್ತು ಎಂದು ನುಡಿಯುತ್ತಾರೆ.

4. 4 ನೇ ಪ್ರತಿವಾದಿ ನನ್ನ ಅತ್ತೆ, ಅಂದರೆ ನನ್ನ ಹೆಂಡತಿಯ ತಾಯಿ. ನಿಡಿ-1 ಸುಳ್ಳು ದಾಖಲೆ ಎಂದರೆ ಸರಿಯಲ್ಲ. ನಿಡಿ-1 ರಲ್ಲಿರುವ ನನ್ನ ತಂದೆಯದಲ್ಲ ಎಂದರೆ ಸರಿಯಲ್ಲ. ನಿಡಿ-1 ರಲ್ಲಿರುವ ಹೆಣ್ಣು ಮಕ್ಕಳ ಸಹಿಯನ್ನು ನಾನೇ ಮಾಡಿಸಿದ್ದೇನೆ ಎಂದರೆ ಸರಿಯಲ್ಲ. ನಿಡಿ-1 ನ್ನು ನಾನೇ ನನ್ನ ಸ್ವಂತಕ್ಕೆ 4 ನೇ ಪ್ರತಿವಾದಿಯ ಹೆಸರಿಗೆ ಮಾಡಿಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ವಾದಿಗೆ ಮೋಸ ಮಾಡುವ ಉದ್ದೇಶದಿಂದ ನಿಡಿ-1 ನ್ನು ನಾನೇ ತಯಾರು ಮಾಡಿಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ನಿಡಿ-1 ರಲ್ಲಿರುವ ಆಸ್ತಿಗೆ 2003 ರಲ್ಲಿ ಎಕರೆಗೆ 3-4 ಲಕ್ಷ ಇದ್ದರೂ ಸಹ ಸುಳ್ಳು ಮೌಲ್ಯ ತೋರಿಸಿದ್ದೇವೆ ಎಂದರೆ ಸರಿಯಲ್ಲ.ನಿಡಿ-1 ನ್ನು 4 ನೇ ಪ್ರತಿವಾದಿಯ ಹೆಸರಿಗೆ ಮಾಡಿಸಿ ನಂತರ ನನ್ನ ಹೆಸರಿಗೆ ಮಾಡುವ ಉದ್ದೇಶ ಹೊಂದಿದ್ದೆ ಎಂದರೆ ಸರಿಯಲ್ಲ. ನಿಡಿ-1 ಕ್ಕೆ

ನನ್ನ ಅಕ್ಕ ತಂಗಿಯರನ್ನು ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸಾಕ್ಷಿ ನನ್ನ ತಂದೆ ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ. ನನ್ನ ಅಕ್ಕ ತಂಗಿಯರಿಗೆ ಮೋಸ ಮಾಡುವ ಉದ್ದೇಶದಿಂದ ಅವರನ್ನು ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. 2003 ರಲ್ಲಿ ನನ್ನ ತಮ್ಮನಿಗೆ 19-20 ವಯಸ್ಸಾಗಿತ್ತು ಎಂದರೆ ಸಾಕ್ಷಿ ಮದುವೆಯಾಗಿತ್ತು ಎಂದು ನುಡಿಯುತ್ತಾರೆ. 5 ನೇ ಪ್ರತಿವಾದಿ ಸಹಿ ಮಾಡುತ್ತಾರೆ ಎಂದರೆ ಸಾಕ್ಷಿ ಆ ಬಗ್ಗೆ ಗೊತ್ತಿಲ್ಲ ಆದರೆ ಹೆಬ್ಬೆಟ್ಟು ಹಾಕುತ್ತಿದ್ದರು ಎಂದು ನುಡಿಯುತ್ತಾರೆ. 5 ನೇ ಪ್ರತಿವಾದಿ ನ್ಯಾಯಾಲಯಕ್ಕೆ ಸಲ್ಲಿಸಿರುವ ಎಲ್ಲಾ ದಾಖಲೆಗಳಲ್ಲಿ ಸಹಿ ಮಾಡಿದ್ದಾರೆ ಎಂದರೆ ಸಾಕ್ಷಿ ಈಗ ಕಲಿತುಕೊಂಡು ಮಾಡಿದ್ದಾರೆ ಎಂದು ನುಡಿಯುತ್ತಾರೆ. ನಿಡಿ-1 ರಲ್ಲಿ ನಾನೇ 5 ನೇ ಪ್ರತಿವಾದಿಯ ಹೆಬ್ಬೆಟ್ಟಿನ ಗುರುತು ಹಾಕಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಾನು ಹಾಜರು ಪಡಿಸಿರುವ ಪಹಣಿಗಳಲ್ಲಿ ನನ್ನ ಹೆಸರು ನನ್ನ ತಂದೆಯವರೇ ಮಾಡಿರುತ್ತಾರೆ. ಸದರಿ ಪಹಣಿಗಳನ್ನು ಕಂದಾಯ ಅಧಿಕಾರಿಗಳ ಜೊತೆ ಶಾಮೀಲಾಗಿ ಸೃಷ್ಟಿಮಾಡಿ ಹಾಜರು ಪಡಿಸಿದ್ದೇವೆ ಎಂದರೆ ಸರಿಯಲ್ಲ. ನನ್ನ ಮತ್ತು ನನ್ನ ಅಕ್ಕ ತಂಗಿಯರ ನಡುವೆ ಯಾವುದೇ ವಿಭಾಗ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ಈ ಹಂತದಲ್ಲಿ ಮುಂದುವರಿದ ಪಾಟಿ ಸವಾಲಿಗೆ ಕಾಲವಕಾಶ ಕೋರಿದ್ದು, ನೀಡಲಾಯಿತು.)**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಎ. ಒಪ್ಪಲಾಗಿದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ದೇವನಹಳ್ಳಿ.**

ಡಿಡಬ್ಲೂ-2 ಓ.ಎಸ್.ನಂ.537/2008

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ.28.03.2024**

**ಪಾಟಿ ಸವಾಲುಃ ಪ್ರತಿವಾದಿ-1, 2 ಮತ್ತು 4 ರವರ ಪರ ಶ್ರೀ.ಹೆಚ್ ಆರ್ ಎಸ್ ವಕೀಲರಿಂದಃ**

7. ವಾದಿ ಈ ದಾವೆಯಲ್ಲಿ ತಿಳಿಸಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ದಾವಾ ಆಸ್ತಿಗಳಲ್ಲಿ ನಮಗೆ ಭಾಗ ಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಷೆಡ್ಯೂಲ್ ಡಿ ಆಸ್ತಿಯನ್ನು 3 ಜನ ಹೆಣ್ಣು ಮಕ್ಕಳಿಗೂ ಭಾಗ

ಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಸದರಿ ಆಸ್ತಿಯಲ್ಲಿ ನಾವು ಸ್ವಾದೀನದಲ್ಲಿ ಇದ್ದೇವೆ ಎಂದರೆ ಸರಿಯಲ್ಲ. ಅದೇ ರೀತಿ ವಾದಿಗಳು ಸಹ ಷೆಡ್ಯೂಲ್ ಡಿ ಆಸ್ತಿಯಲ್ಲಿ ಸ್ವಾದೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ದಿಃ20.07.2005 ರಲ್ಲಿ ವಿಭಾಗ ಆದಂತೆ ಅವರವರಿಗೆ ಬಂದ ಆಸ್ತಿಯಲ್ಲಿ ಸ್ವಾದೀನದಲ್ಲಿದ್ದಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನನ್ನ ತಂದೆ ಮೃತಪಟ್ಟ ನಂತರ ನಮ್ಮ ಮದುವೆಗೆ ಮಾಡಿದ್ದ ಸಾಲದಲ್ಲಿ 10 ಲಕ್ಷ ಸಾಲ ಬಾಕಿ ಇತ್ತು ಎಂದರೆ ಸರಿಯಲ್ಲ. ಸದರಿ ಸಾಲವನ್ನು ನನ್ನ ತಮ್ಮ 2 ನೇ ಪ್ರತಿವಾದಿ ಆತನ ಭಾಗಕ್ಕೆ ಬಂದ ಆಸ್ತಿಗಳನ್ನು ಪ್ರತಿವಾದಿ 3 ಮತ್ತು 4 ರವರಿಗೆ ಮಾರಾಟ ಮಾಡಿ ಸಾಲ ತೀರಿಸಿದ್ದಾನೆ ಎಂದರೆ ಸರಿಯಲ್ಲ.

8. ದಿಃ20.07.2005 ರಂದು ಆದ ಮೌಕಿಕ ವಿಭಾಗವನ್ನು ರದ್ದು ಪಡಿಸಲು ನಾನಾಗಲೀ, ವಾದಿಯಾಗಲೀ ಕೇಳಿರುವುದಿಲ್ಲ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ದಾವೆ ಸಲ್ಲಿಸುವ ಸಂದರ್ಬದಲ್ಲಿ ನಮ್ಮ ಕುಟುಂಬಕ್ಕೆ ಯಾವುದೇ ಒಟ್ಟು ಕುಟುಂಬದ ಆಸ್ತಿಗಳು ಉಳಿದಿರಲಿಲ್ಲ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಷೆಡ್ಯೂಲ್ ಡಿ ಆಸ್ತಿಯನ್ನು ಹೊರತು ಪಡಿಸಿ ನಮಗೇ ಬೇರೇ ಆಸ್ತಿಗಳಲ್ಲಿ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ಆ ರೀತಿ ಬೇರೆ ಆಸ್ತಿಗಳಲ್ಲಿ ಹಕ್ಕು ಇಲ್ಲದೇ ಇದ್ದರೂ ವಾದಿಯು ಸುಳ್ಳು ದಾವೆಯನ್ನು ಸಲ್ಲಿಸಿದ್ದು ಅದಕ್ಕೆ ಪೂರಕವಾಗಿ ಸುಳ್ಳು ಪ್ರತಿದಾವೆ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ಖರೀದಿಸಿರುವ ಆಸ್ತಿಯಲ್ಲಿ ಸ್ವಾದೀನದಲ್ಲಿ ಇದ್ದಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಷೆಡ್ಯೂಲ್ ಡಿ ಆಸ್ತಿ ಹೊರತು ಪಡಿಸಿ ಬೇರೇ ಆಸ್ತಿಗಳಲ್ಲಿ ನಾನಾಗಲೀ ವಾದಿಯಾಗಲೀ ಸ್ವಾದೀನದಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ. ನಮಗೆ ಯಾವುದೇ ಹಕ್ಕು ಇಲ್ಲದೇ ಇದ್ದರೂ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ಮರು ವಿಚಾರಣೆಃ ಇಲ್ಲ.)**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಎ. ಒಪ್ಪಲಾಗಿದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ದೇವನಹಳ್ಳಿ.**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ.03.01.2024**

**ಪಾಟಿ ಸವಾಲುಃ ಪ್ರತಿವಾದಿ-1, 2 ಮತ್ತು 4 ರವರ ಪರ ಶ್ರೀ.ಹೆಚ್ ಆರ್ ಎಸ್ ವಕೀಲರಿಂದಃ**

1. ವಾದಿಯು ಅಂದರೆ ನನ್ನ ತಂಗಿ ಈ ದಾವೆಯನ್ನು ವಿಭಾಗವನ್ನು ಕೋರಿ ಸಲ್ಲಿಸಿರುತ್ತಾರೆ. ವಾದ ಪತ್ರದಲ್ಲಿರುವ ವಿಚಾರವನ್ನು ನಾನು ತಿಳಿದುಕೊಂಡಿರುತ್ತೇನೆ. ಉಭಯ ಪಕ್ಷಗಾರರು ಹಾಜರು ಪಡಿಸಿರುವ ದಾಖಲಾತಿಗಳ ಬಗ್ಗೆ ನಾನು ತಿಳಿದುಕೊಂಡಿರುವುದಿಲ್ಲ. ನನ್ನ ತಾತನ ಹೆಸರು ತಾಯಪ್ಪ. ನನ್ನ ತಾತನಿಗೆ ಎಷ್ಟು ಜನ ಮಕ್ಕಳು ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ತಾತನಿಗೆ ಯಾವುದೇ ಪಿತ್ರಾರ್ಜಿತ ಆಸ್ತಿಗಳು ಆತನ ಪೂರ್ವಿಕರಿಂದ ಬಂದಿರುವುದಿಲ್ಲ ಎಂದರೆ ಸರಿಯಲ್ಲ. ಆ ರೀತಿ ನನ್ನ ತಾತನಿಗೆ ಆತನ ಪೂರ್ವಿಕರಿಂದ ಬಂದು ಆಸ್ತಿಯ ಸಂಖ್ಯೆ ನನಗೆ ಗೊತ್ತಿರುವುದಿಲ್ಲ. ನನ್ನ ತಾತನಿಗೆ ಆತನ ಪೂರ್ವಿಕರಿಂದ ಬಂದ ಆಸ್ತಿಯ ಬಗ್ಗೆ ದಾಖಲಾತಿಗಳನ್ನು ಹಾಜರು ಪಡಿಸಿದ್ದೀರ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನನ್ನ ತಾತನಿಗೆ ಯಾವುದೇ ಪಿತ್ರಾರ್ಜಿತ ಆಸ್ತಿಗಳು ಆತನ ಪೂರ್ವಿಕರಿಂದ ಬಂದಿರುವುದಿಲ್ಲ ಮತ್ತು ಅವರ ಜೀವಿತ ಅವಧಿಯಲ್ಲಿ ಯಾವುದೇ ಆಸ್ತಿಗಳನ್ನು ಖರೀದಿಸಿರುವುದಿಲ್ಲ ಎಂದರೆ ಸರಿಯಲ್ಲ.

2. ನನ್ನ ತಾತನಿಗೆ ಮುನಿಯಪ್ಪ, ನರಸಿಂಹಪ್ಪ ಮತ್ತು ಚಿಕ್ಕ ಆಂಜಿನಪ್ಪ 3 ಜನ ಮಕ್ಕಳು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸದರಿ ಹೆಸರಿನವರು ನನಗೆ ಗೊತ್ತಿರುವುದಿಲ್ಲ. ಈ 3 ಜನ ವ್ಯಕ್ತಿಗಳು ವ್ಯಯಕ್ತಿಕವಾಗಿ ಕೆಲವು ಆಸ್ತಿಗಳನ್ನು ಖರೀದಿಸಿದ್ದರು ಎಂದರೆ ಸರಿಯಲ್ಲ. ಆ ರೀತಿ 3 ಜನ ಖರೀದಿಸಿದ ಆಸ್ತಿಯಲ್ಲಿ 3 ಜನರು ವಿಭಾಗ ಮಾಡಿಕೊಂಡು ನಿಪಿ-3 ರಂತೆ ಕೆಲವು ಆಸ್ತಿಗಳು ನಮ್ಮ ತಂದೆಯ ಹಿಸ್ಸೆಗೆ ಬಂದಿರುತ್ತದೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಆ ರೀತಿ ನಮ್ಮ ತಂದೆಯ ಹಿಸ್ಸೆಗೆ ಷೆಡ್ಯೂಲ್ ಎ, ಷೆಡ್ಯೂಲ್ ಸಿ, ಷೆಡ್ಯೂಲ್ ಡಿ, ಷೆಡ್ಯೂಲ್ ಇ ಮತ್ತು ಜಿ ಆಸ್ತಿಗಳು ಬಂದಿದೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸದರಿ ಆಸ್ತಿಗಳಿಗೆ ಸಂಬಂದಿಸಿದಂತೆ ನನ್ನ ತಂದೆಯ ಹೆಸರಿಗೆ ಕಂದಾಯದ ಆದಾಯಗಳು ಆಗಿದೆ ಎಂದರೆ ಸಾಕ್ಷಿ ನನಗೆ ಏನೂ ಗೊತ್ತಿಲ್ಲ ಎಂದು ನುಡಿಯುತ್ತಾರೆ. ದಾವಾ ಆಸ್ತಿಯು ಷೆಡ್ಯೂಲ್ ಎಫ್, ಐ, ಹೆಚ್, ಜೆ, ಆಸ್ತಿಗಳು ನಮ್ಮ ಕುಟುಂಬಕ್ಕೆ ಸೇರಿದೆ ಎಂದು ತೋರಿಸಲು ಯಾವುದೇ ದಾಖಲೆಗಳನ್ನು ಹಾಜರು ಪಡಿಸಿಲ್ಲ ಎಂದರೆ ಸರಿ. ನಮ್ಮ ತಂದೆ ಜೀವಂತ ಇದ್ದಾಗ ಯಾವ ಆಸ್ತಿಗಳನ್ನು ಖರೀದಿ ಮತ್ತು ಮಾರಾಟ ಮಾಡಿದ್ದರು ಮತ್ತು ಅದಕ್ಕೆ ಸಂಬಂದಿಸಿದ ಯಾವ ಯಾವ ದಾಖಲಾತಿಗಳು ಆಗಿದೆ ಎಂದು ನನಗೆ ಗೊತ್ತಿರುವುದಿಲ್ಲ. ದಾವಾ ಆಸ್ತಿಯು ಷೆಡ್ಯೂಲ್ ಎಫ್, ಐ, ಹೆಚ್, ಜೆ ಆಸ್ತಿಗಳು ನಮ್ಮ ತಂದೆಗೆ ಸೇರಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಆಸ್ತಿಗಳು ನಮ್ಮ ಕುಟುಂಬಕ್ಕೆ

ಸೇರಿಲ್ಲ ಎಂಬ ಕಾರಣಕ್ಕೆ ವಾದಿಯು ಸದರಿ ಆಸ್ತಿಗಳನ್ನು ಕೈ ಬಿಡುವಂತೆ ಅರ್ಜಿ ಸಲ್ಲಿಸಿದ್ದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

3. ನನ್ನ ತಂದೆ ಯಾವಾಗ ಮೃತಪಟ್ಟರು ಎಂದು ನನಗೆ ಗೊತ್ತಿರುವುದಿಲ್ಲ. ನಮ್ಮ 3 ಜನ ಹೆಣ್ಣು ಮಕ್ಕಳಿಗೆ ನಮ್ಮ ತಂದೆಯೇ ಮದುವೆ ಮಾಡಿದ್ದರು ಎಂದರೆ ಸರಿ. ನಮ್ಮ ಕುಟುಂಬ ಮಧ್ಯಮ ವರ್ಗಕ್ಕೆ ಸೇರಿದ್ದು, ಆರ್ಥಿಕವಾಗಿ ಅನುಕೂಲಸ್ತವಾದ ಕುಟುಂಬ ಅಲ್ಲ ಎಂದರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನಮ್ಮ ತಂದೆ ನಮ್ಮ ಮದುವೆಗೆ ಸಾಲಾ ಮಾಡಿ ಅದ್ದೂರಿಯಾಗಿ ಮದುವೆ ಮಾಡಿದ್ದರು ಎಂದರೆ ಸರಿಯಲ್ಲ. ನಮ್ಮ ಮದುವೆ ಸಂದರ್ಬದಲ್ಲಿ ನಮ್ಮ ತಂದೆ ಹಣವನ್ನು ದಾನವಾಗಿ ಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಆ ರೀತಿ ಮದುವೆ ಮಾಡಿ ಗಂಡನ ಮನೆಗೆ ಹೋದ ನಂತರ ಸದರಿ ಹಣದಲ್ಲಿ ಆಸ್ತಿ ಖರೀದಿಸಿ ಅನುಕೂಲವಾಗಿದ್ದೇವೆ ಎಂದರೆ ಸರಿಯಲ್ಲ. ನನ್ನ ಮತ್ತು ಸಹೋದರಿಯರ ಬಾಣಂತನವನ್ನು ನನ್ನ ತಂದೆ ತಾಯಿ ಮಾಡಿದ್ದಾರೆ ಎಂದರೆ ಸರಿಯಲ್ಲ.

4. ದಿಃ01.10.2003 ರಲ್ಲಿ ನಿಡಿ-1 ರಂತೆ ನನ್ನ ತಂದೆ ಜೀವಂತವಿದ್ದಾಗ ಸರ್ವೆ ನಂ.175 2 ಎಕರೆ 8 ಗುಂಟೆ ಆಸ್ತಿಯನ್ನು ಮಾರಾಟ ಮಾಡಿದ್ದಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನಿಡಿ-1 ಕ್ಕೆ ನಾನು ಸಾಕ್ಷಿಯಾಗಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಅದೇ ರೀತಿ ವಾದಿ ಹಾಗೂ ಪ್ರತಿವಾದಿಗಳು ಸಹಿ ಮಾಡಿದ್ದಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಆ ರೀತಿ ಖರೀದಿಸಿದ ನಂತರ 4 ನೇ ಪ್ರತಿವಾದಿ ಸದರಿ ಆಸ್ತಿಯ ಸ್ವಾದೀನಾನುಭವ ಹೊಂದಿದ್ದಾರೆ ಎಂದರೆ ಸರಿಯಲ್ಲ. ಸದರಿ ಆಸ್ತಿಯ ಕಂದಾಯ ದಾಖಲೆಗಳು ಯಾರ ಹೆಸರಿನಲ್ಲಿ ಇದೆ ಎಂದು ನನಗೆ ಗೊತ್ತಿರುವುದಿಲ್ಲ. ಸದರಿ ಆಸ್ತಿಯಲ್ಲಿ ನಾನಾಗಲೀ, ನನ್ನ ಸಹೋದರ ಸಹೋದರಿಯರಾಗಲೀ ಸ್ವಾದೀನದಲ್ಲಿ ಇಲ್ಲ ಎಂದರೆ ಸರಿಯಲ್ಲ. ಸದರಿ ಆಸ್ತಿಗೆ 4 ನೇ ಪ್ರತಿವಾದಿಯ ಹೆಸರಿನಲ್ಲಿ ಕಂದಾಯ ಬರುತ್ತಿದೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ದಾವೆಯಲ್ಲಿ ನಾನು ಹಾಜರಾದ ಮೇಲೆ ನಿಡಿ-1 ಕ್ರಯ ಪತ್ರದ ಬಗ್ಗೆ ತಿಳಿದುಕೊಂಡಿರುವುದಿಲ್ಲ. ನಿಡಿ-1 ನನ್ನ ತಂದೆಯ ಸ್ವ ಯಾರ್ಜಿತವಾದ ಆಸ್ತಿ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

5. ಸರ್ವೆ ನಂ.14/1 2 ಎಕರೆ 20 ಗುಂಟೆ ಆಸ್ತಿಯನ್ನು ನನ್ನ ತಂದೆ ಗೇಣಿ ಆಧಾರದಲ್ಲಿ ಉಳಿಮೆ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಆ ರೀತಿ ಗೇಣಿ ಸರ್ಕಾರದವರು ನನ್ನ ತಂದೆಯ ಹೆಸರಿಗೆ ಅಧಿಕೃತ ಮಾಡಿದ್ದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸರ್ವೆ ನಂ.18 18 ಗುಂಟೆ ಆಸ್ತಿಯನ್ನು ಸಹ ನನ್ನ ತಂದೆ ಗೇಣಿ ಆಧಾರದಲ್ಲಿ ಉಳಿಮೆ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಆ ರೀತಿ ಗೇಣಿ ಸರ್ಕಾರದವರು ನನ್ನ ತಂದೆಯ ಹೆಸರಿಗೆ ಅಧಿಕೃತ ಮಾಡಿದ್ದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನನ್ನ ತಂದೆ ಜೀವಂತವಾಗಿದ್ದಾಗ ದಿಃ20.07.2005 ರಲ್ಲಿ ಉಳಿದ ಆಸ್ತಿಗಳನ್ನು ವಿಭಾಗ

ಮಾಡಿದ್ದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನನ್ನ ತಂದೆ ಜೀವಂತವಿರುವ ವರೆಗೆ ಕುಟುಂಬದ ವ್ಯವಹಾರವನ್ನು ನನ್ನ ತಂದೆಯೇ ಮಾಡುತ್ತಿದ್ದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ **(ಪ್ರತಿ ಪ್ರಶ್ನೆಗೂ ಸಾಕ್ಷಿ ನನಗೆ ಏನೂ ಗೊತ್ತಿರುವುದಿಲ್ಲ ಎಂದು ಹೇಳುವುದನ್ನು ನ್ಯಾಯಾಲಯವು ಗಮನಿಸಿರುತ್ತದೆ.)**

6. ದಿ:20.07.2005 ರಲ್ಲಿ ನನ್ನ ತಂದೆ ಸ್ವ ಯಾರ್ಜಿತ ಆಸ್ತಿಗಳಾಗಿದ್ದರಿಂದ ಭಾಗ ಮಾಡಿಕೊಳ್ಳುವ ಹಕ್ಕು ಇತ್ತು ಎಂದರೆ ಸಾಕ್ಷಿ ಪಿತ್ರಾರ್ಜಿತವಾಗಿದ್ದು, ನನಗೂ ಹಕ್ಕು ಇದೆ ಎಂದು ನುಡಿಯುತ್ತಾರೆ. ಆ ನಂತರ ಷೆಡ್ಯೂಲ್-ಡಿ ಆಸ್ತಿಯನ್ನು 3 ಜನ ಹೆಣ್ಣು ಮಕ್ಕಳಿಗೆ ಭಾಗ ಮಾಡಿ ಕೊಟ್ಟಿದ್ದರು ಎಂದರೆ ಸರಿಯಲ್ಲ. ಆ ನಂತರ ಸದರಿ ಆಸ್ತಿ 3 ಜನ ಹೆಣ್ಣು ಮಕ್ಕಳ ಹೆಸರಿಗೆ ಕಂದಾಯ ದಾಖಲಾತಿ ಬಂದಿದೆ ಎಂದರೆ ಸರಿಯಲ್ಲ. ಸಾಮಾನ್ಯವಾಗಿ ಕಂದಾಯ ಇಲಾಖೆಗೆ ಅರ್ಜಿ ಕೊಟ್ಟಿದ್ದಾಗ ಮಾತ್ರ ದಾಖಲಾತಿ ಮಾಡುತ್ತಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಆ ರೀತಿ ನಾವು 3 ಜನ ಹೆಣ್ಣು ಮಕ್ಕಳು ಅರ್ಜಿ ಸಲಿಲಸಿದ್ದ ಆಧಾರದ ಮೇರೆಗೆ ನಮ್ಮ ನಮ್ಮ ಹೆಸರಿಗೆ ಖಾತೆ ಮಾಡಿದ್ದಾರೆ ಎಂದರೆ ಸರಿಯಲ್ಲ. ಷೆಡ್ಯೂಲ್-ಡಿ ಆಸ್ತಿಯ ಕಂದಾಯ ದಾಖಲೆಗಳು ಯಾರ ಹೆಸರಿನಲ್ಲಿ ಇರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಸದರಿ ಆಸ್ತಿಗಳು ಯಾರ ಹೆಸರಿನಲ್ಲಿ ಇದೆ ಎಂದು ನಾನು ತಿಳಿದುಕೊಂಡಿರುವುದಿಲ್ಲ. ಷೆಡ್ಯೂಲ್-ಡಿ ಆಸ್ತಿಯ ಕಂದಾಯ ದಾಖಲೆಗಳು ಯಾರ ಹೆಸರಿನಲ್ಲಿ ಇದೆ ಎಂದು ನಮ್ಮ ವಕೀಲರ ಮೂಲಕ ತಿಳಿದುಕೊಳ್ಳುವ ಪ್ರಯತ್ನ ಮಾಡಿರುವುದಿಲ್ಲ.

**(ಈ ಹಂತದಲ್ಲಿ ಮುಂದುವರಿದ ಪಾಟಿ ಸವಾಲಿಗೆ ಕಾಲವಕಾಶ ಕೋರಿದ್ದು, ನೀಡಲಾಯಿತು.)**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಎ. ಒಪ್ಪಲಾಗಿದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ದೇವನಹಳ್ಳಿ.**